ಕರ್ನಾಟಕ ಸರ್ಕಾರ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಬೆಂಗಳೂರು

ಸಂಖ್ಯೆ: ಇಡಿ/ಕೆಇಎ/ಪತ್ರಿಕಾ ಪ್ರಕಟಣೆ/2020 ದಿನಾಂಕ: 31-03-2020

**ಪತ್ರಿಕಾ ಪ್ರಕಟಣೆ**

**ಕರ್ನಾಟಕ ವಸತಿ ಸಂಘ ಸಂಸ್ಥೆಗಳ ಪ್ರವೇಶ ಪರೀಕ್ಷೆ ಮುಂದೂಡಿಕೆ.**

ರಾಜ್ಯದಲ್ಲಿ ಕರೋನ ವೈರಾಣು (ಕೋವಿಡ್-19) ಹರಡುವುದನ್ನು ತಡೆಗಟ್ಟಲು ಮುಂಜಾಗ್ರತೆ ಕ್ರಮ ವಹಿಸುವ ಹಿನ್ನೆಲೆಯಲ್ಲಿ, ಕರ್ನಾಟಕ ವಸತಿ ಸಂಘ ಸಂಸ್ಥೆಗಳಲ್ಲಿ 2020ನೇ ಸಾಲಿಗೆ 6ನೇ ತರಗತಿಯ ವಸತಿ ಶಾಲೆಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವುದನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿತ್ತು ಮತ್ತು ಪುನಃ ಆನ್‌ಲೈನ್ ಮೂಲಕ ಅರ್ಜಿಸಲ್ಲಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸುವ ದಿನಾಂಕವನ್ನು ಪ್ರಕಟಿಸುವುದಾಗಿ ತಿಳಿಸಲಾಗಿತ್ತು.

ಪ್ರಸ್ತುತ ದಿನಾಂಕ **06-05-2020** ರಂದು ನಡೆಸಲು ನಿಗದಿಪಡಿಸಲಾಗಿದ್ದ ಪ್ರವೇಶ ಪರೀಕ್ಷೆಯನ್ನೂ ಸಹ ಮುಂದೂಡಲಾಗಿರುತ್ತದೆ ಎಂದು ಈ ಮೂಲಕ ಅಭ್ಯರ್ಥಿಗಳಿಗೆ ತಿಳಿಯಪಡಿಸಲಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕಗಳನ್ನು ಮತ್ತು ಪ್ರವೇಶ ಪರೀಕ್ಷೆಯ ದಿನಾಂಕವನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಮತ್ತು ದಿನಪತ್ರಿಕೆಗಳಲ್ಲಿ ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು.

ಕಾರ್ಯನಿರ್ವಾಹಕ ನಿರ್ದೇಶಕರು.

Scanned by CamScanner